# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 141 |
| ಸದಸ್ಯರ ಹೆಸರು | : | ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರು) |
| ಉತ್ತರಿಸಬೇಕಾದ ದಿನಾಂಕ | : | 16-07-2019 |
| ಉತ್ತರಿಸುವ ಸಚಿವರು | : | ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು |

| | ಪ್ರಶ್ನೆ | ಉತ್ತರ |
|---|---|---|
| (ಅ) | ಬೀದರ್ ಜಿಲ್ಲೆಯ ಎಲ್ಲಾ ವಿಧಾನಸಭಾ ಕ್ಷೇತ್ರದಲ್ಲಿ R.M.S.A ಯೋಜನೆಯಡಿ ಪ್ರೌಢಶಾಲಾ ಕಟ್ಟಡ ಹಾಗೂ ಪ್ರೌಢಶಾಲಾ ಬಲವರ್ಧನೆ ಯೋಜನೆಯಡಿಮಂಜೂರಾದ ಕಾಮಗಾರಿಗಳ ಸಂಖ್ಯೆ ಎಷ್ಟು ; | ಬೀದರ್ ಜಿಲ್ಲೆಯ ಎಲ್ಲಾ ವಿಧಾನಸಭಾ ಕ್ಷೇತ್ರದಲ್ಲಿ R.M.S.A ಯೋಜನೆಯಡಿ 2009-10ರಿಂದ ಇಲ್ಲಿಯವರೆಗೆ ಮಂಜೂರಾದ ಕಾಮಗಾರಿಗಳ ವಿವರಗಳು; (see table below) |
| (ಆ) | 2017,2018 ಹಾಗೂ 2019ನೇ ಸಾಲಿನಲ್ಲಿ ಪಂಚಾಯತ್ ರಾಜ್ ಇಲಾಖೆಯ ಮುಖಾಂತರ ಯೋಜನೆಯಡಿ ಮಂಜೂರಾದ ಸರ್ಕಾರಿ ಪ್ರೌಢಶಾಲಾ ಕಟ್ಟಡ ಕಾಮಗಾರಿಗಳು ಪ್ರಾರಂಭವಾಗದೇ ಇರಲು ಕಾರಣಗಳೇನು ; | ಪಂಚಾಯತ್ ರಾಜ್ ಇಲಾಖೆಯ ಮುಖಾಂತರ ಬೀದರ ಜಿಲ್ಲೆಯಲ್ಲಿ ಆರ್.ಎಂ.ಎಸ್.ಎ ಯೋಜನೆಯಲ್ಲಿ ಮಂಜೂರಾದ 21 ಕಾಮಗಾರಿಗಳನ್ನು ನಿರ್ಮಾಣ ಮಾಡಲು ಯೋಜಿಸಲಾಗಿದೆ. ಈ ಕಾಮಗಾರಿಗಳಿಗೆ ಕೇಂದ್ರ ಸರ್ಕಾರದಿಂದ ಅನುದಾನ ಬಿಡುಗಡೆಯಾಗದ ಕಾರಣ ಕಾಮಗಾರಿಗಳು ಪ್ರಾರಂಭವಾಗಿರುವುದಿಲ್ಲ. |
| (ಇ) | ಕಟ್ಟಡ ನಿರ್ಮಾಣಕ್ಕಾಗಿ ಅನುದಾನವನ್ನು ಯಾವ ಕಾಲಮಿತಿಯೊಳಗೆ ಪಂಚಾಯತ್ ರಾಜ್ ಇಲಾಖೆಗೆ ಬಿಡುಗಡೆ ಮಾಡಲಾಗುವುದು; | ಕೇಂದ್ರ ಸರ್ಕಾರದಿಂದ ಅನುದಾನ ಬಿಡುಗಡೆಯಾದ ನಂತರ ಕ್ರಮವಹಿಸಲಾಗುವುದು |
| (ಈ) | ಬಾಕಿ ಇರುವ ಕಟ್ಟಡಗಳನ್ನು ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು: | ಆರ್.ಎಂ.ಎಸ್.ಎ ಅಡಿಯಲ್ಲಿ ಮಂಜೂರಾಗಿರುವ ಒಟ್ಟು 68 ಕಾಮಗಾರಿಗಳಲ್ಲಿ 47 ಕಾಮಗಾರಿಗಳನ್ನು ಕೈಗೆತ್ತಿಗೊಂಡಿದ್ದು, ಇದರಲ್ಲಿ 46 ಕಾಮಗಾರಿಗಳು ಪೂರ್ಣಗೊಂಡಿರುತ್ತದೆ. ಉಳಿದ 01 ಕಾಮಗಾರಿಯಾದ ಸರ್ಕಾರಿ ಪ್ರೌಢ ಶಾಲೆ ಯಲ್ಲದಗುಂಡಿ ಶಾಲೆಯ ಕಟ್ಟಡಕ್ಕೆ ಸೂಕ್ತ ನಿವೇಶನದ ಅಲಭ್ಯತೆಯಿಂದ ಕಾಮಗಾರಿಯನ್ನು ಕೈಗೊಂಡಿರುವುದಿಲ್ಲ. ಕೈಗೆತ್ತಕೊಳ್ಳಬೇಕಾದ ಉಳಿದ 21 ಕಾಮಗಾರಿಗಳನ್ನು ಕೇಂದ್ರ ಸರ್ಕಾರದಿಂದ ಅನುದಾನ ಬಿಡುಗಡೆಯಾದ ನಂತರ ಕ್ರಮ ವಹಿಸಲಾಗುವುದು. |

| ಕ್ರ.ಸಂ | ಯೋಜನೆ | ಕಾಮಗಾರಿಗಳ ಸಂಖ್ಯೆ |
|---|---|---|
| 1 | ಪ್ರೌಢಶಾಲಾ ಕಟ್ಟಡಗಳ ಉನ್ನತೀಕರಣ | 19 |
| 2 | ಪ್ರೌಢಶಾಲಾ ಕಟ್ಟಡಗಳ ಬಲವರ್ಧನೆ | 45 |
| 3 | ಆದರ್ಶ ವಿದ್ಯಾಲಯ ನಿರ್ಮಾಣ | 04 |
| | ಒಟ್ಟು | 68 |

ಇಪಿ 12 ಎಂಸಿಡಿ 2019

(ಎಸ್.ಆರ್. ಶ್ರೀನಿವಾಸ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು